**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**ಕಿರಿಯ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 164, ವಿದ್ಯಾಪೀಠ ಬೆಂಗಳೂರು.**

ಸಂಖ್ಯೆ: ಸ.ಅ/ವಾ–164/ಪಿಆರ್/2020–21

ದಿನಾಂಕ: 19–12–2020

**ಡಿಸಂಬರ್ ಮಾಹೆಯ 2ನೇ ವಾರ್ಡ್ ಸಮಿತಿ ಸಭೆಯ ನಡವಳಿಗಳು**

***********

ವಿಷಯ: ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ: ಬಿ12(5)/ಪಿಆರ್/35/2020–21, ದಿನಾಂಕ: 21–09–2020ರ ಆದೇಶದಂತೆ ದಿನಾಂಕ: 17–10–2020 ರಂದು ವಾರ್ಡ್ ಸಂಖ್ಯೆ: 164, ವಿದ್ಯಾಪೀಠದಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

ಸ್ಥಳ : ಬಿಬಿಎಂಪಿ ವಿವಿಧೋದ್ದೇಶ ಕಟ್ಟಡ, ಶ್ರೀಕಂಠೇಶ್ವರ ಪಾರ್ಕ್ ಹತ್ತಿರ

ಸಮಯ : ಸಂಜೆ 4.00 ಗಂಟೆಗೆ ದಿನಾಂಕ: 19–12–2020

**ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಆರ್. ವಿಜಯ್‌ಕುಮಾರ್ | ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2 | ಶ್ರೀ ನಂದೀಶ್ .ಎಸ್ | ಕಿರಿಯ ಅಭಿಯಂತರರು, ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್ 164, ವಿದ್ಯಾಪೀಠ |
| 3 | ಡಾ॥ ಜಾನ್ಸಿ .ಎಂ | ವೈದ್ಯಾಧಿಕಾರಿ (ಸಿ.ಟಿ ಬೆಡ್ ಆರೋಗ್ಯ ಕೇಂದ್ರ) |
| 4 | ಶ್ರೀ ಸುನಿಲ್ | ಹಿರಿಯ ಆರೋಗ್ಯ ಪರಿವೀಕ್ಷಕರು (ಬಸವನಗುಡಿ ವಲಯ) |
| 5 | ಶ್ರೀ ಹರೀಶ್ | ಕಂದಾಯ ಪರಿವೀಕ್ಷಕರು, ವಾರ್ಡ್ ನಂ. 164 |
| 6 | ಶ್ರೀಮತಿ ಲಕ್ಷ್ಮಿ | ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ. 164 |
| 7 | ಶ್ರೀ ಧವಳೇಶ್ | ಸಹಾಯಕ ಅಭಿಯಂತರರು (ಬೆಸ್ಕಾಂ) |
| 8 | ಸ್ವಾಮಿ ಗೌಡ | ವಾರ್ಡ್‌ನ ಹಿರಿಯ ನಾಗರೀಕರು |
| 9 | ಸಾಯಿಕುಮಾರ್ | ವಾರ್ಡ್‌ನ ಹಿರಿಯ ನಾಗರೀಕರು |

ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳಾದ ಶ್ರೀ ಆರ್. ವಿಜಯ್‌ಕುಮಾರ್ ರವರು ಸ್ವ ಪರಿಚಯ ಮಾಡಿಕೊಂಡು ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

1. ವಾರ್ಡ್‌ನಲ್ಲಿ ಕೋವಿಡ್–19 ಪ್ರಕರಣಗಳ ಬಗ್ಗೆ ಶ್ರೀ ಸುನಿಲ್, ಹಿರಿಯ ಆರೋಗ್ಯ ಪರಿವೀಕ್ಷಕರು ರವರು ಮಾತನಾಡಿ ಆರೋಗ್ಯ ಇಲಾಖೆ ವತಿಯಿಂದ ಕೋವಿಡ್–19 ಗೆ ಸಂಬಂಧಪಟ್ಟಂತೆ ಎಲ್ಲಾ ರೀತಿಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದ್ದು, ವಾರ್ಡ್–164, ವಿದ್ಯಾಪೀಠ ವ್ಯಾಪ್ತಿಯಲ್ಲಿ ಮೊಬೈಲ್ ಪಾಯಿಂಟಿಂಗ್, ಪರೀಕ್ಷಾ ಕೇಂದ್ರಗಳಲ್ಲಿ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಕೋವಿಡ್ ತಪಾಸಣೆ ನಡೆಸಲಾಗುತ್ತಿದ್ದು, ಪ್ರತಿ ದಿನವೂ ಸರಿ ಸುಮಾರು 150–200 ಪರೀಕ್ಷೆಗಳನ್ನು ಪಾಲಿಕೆ ವತಿಯಿಂದ ನಡೆಸಲಾಗುತ್ತಿದೆ ಎಂದು ಸಭೆಯಲ್ಲಿ ತಿಳಿಸಿರುತ್ತಾರೆ.

2. ವಾರ್ಡಿನಲ್ಲಿ ಒಟ್ಟು 15,000 ಆರ್.ಟಿ.ಪಿ.ಸಿ.ಆರ್ ಟೆಸ್ಟ್‌ಗಳನ್ನು ಮಾಡಲಾಗಿದ್ದು, ಅದರಲ್ಲಿ ಚಾಲ್ತಿಯಲ್ಲಿರುವ ಪ್ರಕರಣ ಸಂ. 990 ಹಾಗೂ ಕಾಲಕಾಲಕ್ಕೆ ಕೋವಿಡ್-19 ನಿಯಂತ್ರಣಕ್ಕೆ ಬರುತ್ತಿರುವುದರಿಂದ ಅತಿ ಹೆಚ್ಚು ನಿಗಾ ವಹಿಸಲಾಗಿರುತ್ತದೆ ಎಂದು ಹಿರಿಯ ಆರೋಗ್ಯ ಪರಿವೀಕ್ಷಕರು ಸಭೆಯಲ್ಲಿ ತಿಳಿಸಿರುತ್ತಾರೆ.

3. ಘನತ್ಯಾಜ್ಯ ವಿಲೇವಾರಿಗೆ ಸಂಬಂಧಿಸಿದಂತೆ, ಹಲವಾರು ತುರ್ತು ಕ್ರಮಗಳನ್ನು ಅಳವಡಿಸಿಕೊಂಡು 23 ಟಿಪ್ಪರ್ ಆಟೋ, 80 ಜನ ಪೌರಕಾರ್ಮಿಕರು, 02 ಲಿಫ್ಟಿಂಗ್ ಕಾಂಪ್ಯಾಕ್ಟರ್ ಮೂಲಕ ಮನೆ ಮನೆಯ ಘನತ್ಯಾಜ್ಯವನ್ನು ಪ್ರತಿ ದಿನವೂ ಬೆಳಿಗ್ಗೆ 6.30 ರಿಂದ 10.30ರವರೆಗೆ ಸಂಗ್ರಹಿಸಲಾಗುತ್ತಿದೆ ಎಂದು ಹಿರಿಯ ಆರೋಗ್ಯ ಪರಿವೀಕ್ಷಕರು ಸಭೆಯಲ್ಲಿ ತಿಳಿಸಿರುತ್ತಾರೆ. ಹಸಿ ಮತ್ತು ಒಣ ತ್ಯಾಜ್ಯಗಳನ್ನು ಬೇರ್ಪಡಿಸಿ ಆಟೋಗಳ ಲಭ್ಯತೆಯ ಮೇರೆಗೆ ಪ್ರತಿ ದಿನವೂ ವಿಲೇವಾರಿ ಮಾಡಲಾಗುತ್ತಿದೆ. ಈ ಸಂಬಂಧ ವಾರ್ಡಿನಲ್ಲಿರುವ ಬ್ಲಾಕ್ ಸ್ಪಾಟ್‌ಗಳನ್ನು ತುರ್ತಾಗಿ ತೆರವುಗೊಳಿಸಲು ಸಂಬಂಧಪಟ್ಟ ಹಿರಿಯ / ಕಿರಿಯ ಆರೋಗ್ಯ ಪರಿವೀಕ್ಷಕರಿ ನೋಡಲ್ ಅಧಿಕಾರಿಯವರು ಸೂಚಿಸಿರುತ್ತಾರೆ.

4. ವಾರ್ಡ್ ವ್ಯಾಪ್ತಿಯ ಬೆಸ್ಕಾಂ ರವರು ರಸ್ತೆ ಅಗೆತ ಮಾಡಿ ಅಂಡರ್‌ಗ್ರೌಂಡ್ ಕೇಬಲ್‌ಗಳನ್ನು ಅಳವಡಿಸಿದ್ದು, ಈ ಕಾಮಗಾರಿಯು ಇನ್ನೂ ಒಂದು ವಾರದಲ್ಲಿ ಮುಕ್ತಾಯಗೊಳ್ಳುವುದಾಗಿ ಬೆಸ್ಕಾಂ ಅಭಿಯಂತರರು ಸಭೆಯಲ್ಲಿ ತಿಳಿಸಿರುತ್ತಾರೆ.

5. ಕಳೆದ ಸಭೆಯಲ್ಲಿ ಚರ್ಚಿಸಿದಂತೆ, ಬೆಸ್ಕಾಂ ರವರ ಕೇಬಲ್ ಅಳವಡಿಕೆ ಎಲ್ಲಾ ಕಾಮಗಾರಿಗಳನ್ನು ಆದಷ್ಟು ಬೇಗ ಪೂರ್ಣಗೊಳಿಸಿ ಅಗೆದಿರುವ ರಸ್ತೆಯನ್ನು ಸರಿಪಡಿಸಲು ಹಾಗೂ ಹೆಚ್ಚುವರಿಯಾಗಿ ರಸ್ತೆಯಲ್ಲಿಯೇ ಬಿಟ್ಟಿರುವ ಕೇಬಲ್‌ಗಳನ್ನು ತೆರವುಗೊಳಿಸಲು ಬೆಸ್ಕಾಂ ಅಭಿಯಂತರರಿಗೆ ನೋಡಲ್ ಅಧಿಕಾರಿಯವರು ಸೂಚಿಸಿರುತ್ತಾರೆ.

6. ವಾರ್ಡ್ ವ್ಯಾಪ್ತಿಯಲ್ಲಿ ಓ.ಎಫ್.ಸಿ ಕೇಬಲ್‌ಗಳನ್ನು ಅಳವಡಿಸಿರುವುದು ಕಂಡುಬಂದಿದ್ದು, ಕಾಮಗಾರಿಗೆ ಸೂಕ್ತ ಅನುಮತಿ ಮತ್ತು ಕಾರ್ಯಾದೇಶಗಳು ಇರುವುದು ಕಂಡಬಂದಿರುತ್ತದೆ. 2 ವಾರದ ಅವಧಿಯಲ್ಲಿ ಗುತ್ತಿಗೆದಾರರು ಕಾಮಗಾರಿಯನ್ನು ಪೂರ್ಣಗೊಳಿಸಿ ಅಗೆದಿರುವ ರಸ್ತೆಯನ್ನು ಸರಿಪಡಿಸಲು ಹಾಗೂ ಹೆಚ್ಚುವರಿಯಾಗಿ ರಸ್ತೆಯಲ್ಲಿಯೇ ಬಿಟ್ಟಿರುವ ಕೇಬಲ್‌ಗಳನ್ನು ತೆರವುಗೊಳಿಸಲು ಸಂಬಂಧಪಟ್ಟ ಗುತ್ತಿಗೆದಾರರಿಗೆ ನೋಡಲ್ ಅಧಿಕಾರಿಯವರು ಸೂಚಿಸಿರುತ್ತಾರೆ.

7. ಪಾಲಿಕೆಯ ವಿದ್ಯುತ್ ವಿಭಾಗದ ಇಂಜಿನಿಯರ್ ರವರು ವಾರ್ಡ್ ವ್ಯಾಪ್ತಿಯಲ್ಲಿ ಯಾವುದೇ ಬಲ್ಬ್‌ಗಳನ್ನು ಅಳವಡಿಸುವ ಕಾರ್ಯಕ್ರಮ ಹಮ್ಮಿಕೊಂಡಿರುವುದಿಲ್ಲವೆಂದು, ಯಾವೂದೇ ಬೀದಿ ದೀಪ ನಿರ್ವಹಣೆಯಲ್ಲಿ ಕುಂದು ಕೊರತೆ ಹಾಗೂ ದೂರುಗಳು ವರದಿಯಾಗಿರುವುದಿಲ್ಲವೆಂದು ಹಾಲಿ ಬೀದಿ ದೀಪ ನಿರ್ವಹಣೆಯ ಗುತ್ತಿಗೆದಾರರು ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿರುವುದಾಗಿ ತಿಳಿಸಿರುತ್ತಾರೆ.

8. ವಾರ್ಡ್ ವ್ಯಾಪ್ತಿಯಲ್ಲಿ ಉಂಟಾಗಿರುವ ರಸ್ತೆ ಗುಂಡಿಗಳನ್ನು ಮುಚ್ಚಲು ಎಲ್ಲಾ ರೀತಿಯ ಕ್ರಮ ಕೈಗೊಳ್ಳಲಾಗಿದ್ದು, ಹಾಗೂ ಸಮರ್ಪಕವಾಗಿ ರಸ್ತೆಗುಂಡಿಗಳನ್ನು ಮುಚ್ಚಿದ್ದು, ಹಾಗೂ ರಸ್ತೆಗೆ ಬಿದ್ದಿರುವ ಎಲ್ಲಾ ಮರಗಳನ್ನು ತೆರವುಗೊಳಿಸಿರುವುದಾಗಿ ವಾರ್ಡ್ ಇಂಜಿನಿಯರ್ ತಿಳಿಸಿರುತ್ತಾರೆ.

9. ವಾರ್ಡ್ ವ್ಯಾಪ್ತಿಯಲ್ಲಿ ಬರುವ ಚೆನ್ನಮ್ಮನಕೆರೆ ಅಚ್ಚುಕಟ್ಟು 3ನೇ ಅಡ್ಡರಸ್ತೆ, 5ನೇ ಮುಖ್ಯರಸ್ತೆಯಲ್ಲಿರುವ ಬೃಹತ್ ಮಳೆನೀರು ಗಾಲುವೆಯ ಕಾಮಗಾರಿಯು ಮುಗಿದಿರುವ ಬಗ್ಗೆ ಸಂಬಂಧಪಟ್ಟ ಅಭಿಯಂತರರು ನೋಡಲ್ ಅಧಿಕಾರಿ ರವರಿಗೆ ತಿಳಿಸಿರುತ್ತಾರೆ.

10. ಚೆನ್ನಮ್ಮನಕೆರೆ ಅಚ್ಚುಕಟ್ಟು 3ನೇ ಅಡ್ಡರಸ್ತೆ, 5ನೇ ಮುಖ್ಯರಸ್ತೆಯಲ್ಲಿ ಬೆಂಗಳೂರು ಜಲ ಮಂಡಳಿ ವತಿಯಿಂದ ಪೈಪ್‌ಲೈನ್ ಕಾಮಗಾರಿಯು ಪ್ರಗತಿಯಲ್ಲಿರುವುದಾಗಿ ಸಂಬಂಧಪಟ್ಟ ಅಭಿಯಂತರರು ನೋಡಲ್ ಅಧಿಕಾರಿ ರವರಿಗೆ ತಿಳಿಸಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನೆಗಳೊಂದಿಗೆ ಈ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಹಾಗೂ ಕಿರಿಯ ಅಭಿಯಂತರರು
ವಾರ್ಡ್ ಸಂಖ್ಯೆ: 164, ವಿದ್ಯಾಪೀಠ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 164, ವಿದ್ಯಾಪೀಠ

ಪ್ರತಿಯನ್ನು:

1. ಮಾನ್ಯ ಆಯುಕ್ತರು, ಬೃ.ಬೆ.ಮ.ಪಾಲಿಕೆ, ಎನ್. ಆರ್. ವೃತ್ತ ರವರ ಮಾಹಿತಿಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಆರೋಗ್ಯ & ಘ.ತ್ಯಾ.ನಿ) ರವರ ಮಾಹಿಗಾಗಿ ಸಲ್ಲಿಸಿದೆ.
4. ಮಾನ್ಯ ಉಪ ಆಯುಕ್ತರು ((ಆಡಳಿತ) ರವರ ಮಾಹಿಗಾಗಿ ಸಲ್ಲಿಸಿದೆ.
5. ಮಾನ್ಯ ಜಂಟಿ ಆಯುಕ್ತರು (ದಕ್ಷಿಣ) ರವರ ಮಾಹಿಗಾಗಿ ಸಲ್ಲಿಸಿದೆ.
6. ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
7. ವಾರ್ಡ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
8. ವಾರ್ಡ್ ಸಮಿತಿ ಸದಸ್ಯರ ಮಾಹಿತಿಗಾಗಿ ಕಳುಹಿಸಿದೆ.
9. ಕಛೇರಿ ಪ್ರತಿ.